JANUARY 4,2025
ALL INDIA RADIO- DHARWAD
PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

ದೇಶದಲ್ಲಿ ಸಹಕಾರ ಚಳುವಳಿಗೆ ಒಂದು ಶತಮಾನಕ್ಕೂ ಹೆಚ್ಚಿನ ಇತಿಹಾಸವಿದೆ, ರಾಷ್ಟ್ರದ ಆರ್ಥಿಕ ಹಾಗೂ ಸಾಮಾಜಿಕ ಬೆಳವಣಿಗೆಗೆ ಸಹಕಾರ ಕ್ಷೇತ್ರದ ಕೊಡುಗೆ ಅಪಾರವಾಗಿದೆ ಎಂದು ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪ್ರವಾಸೋದ್ಯಮ ಸಚಿವರಾದ ಎಚ್.ಕೆ.ಪಾಟೀಲ ಅವರು ಹೇಳಿದರು. ಗದಗ ಜಿಲ್ಲೆ ನಾಗಾವಿ ಗ್ರಾಮದಲ್ಲಿರುವ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಸಭಾಭವನದಲ್ಲಿ "ಸ್ಥಿತಿಸ್ಥಾಪಕತ್ವ ಮತ್ತು ಸುಸ್ಥಿರತೆಗಾಗಿ ಸಹಕಾರ ವ್ಯವಹಾರ ಮಾದರಿ" ಕುರಿತ ಜರುಗಿದ 39ನೇ ರಾಷ್ಟ್ರೀಯ ಸಂಶೋಧನಾ ಸಮ್ಮೇಳನವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಭಾರತದ ಸಹಕಾರಿ ಕ್ಷೇತ್ರವು 8 ಕೋಟಿ 50 ಲಕ್ಷ ಸೊಸೈಟಿಗಳು ಹಾಗೂ 29 ಕೋಟಿ ಸದಸ್ಯರನ್ನು ಹೊಂದಿದೆ. ವಿಶ್ವದಲ್ಲೇ ಅತಿ ದೊಡ್ಡ ಸಹಕಾರ ಕ್ಷೇತ್ರ ಹೊಂದಿರುವ ದೇಶ ಭಾರತವಾಗಿದ್ದು, ರಾಷ್ಟ್ರದ ಆರ್ಥಿಕ ಹಾಗೂ ಸಾಮಾಜಿಕ ರಚನೆಗೆ ಗಮನಾರ್ಹ ಕೊಡುಗೆ ನೀಡುತ್ತಿದೆ ಎಂದರು.

<><><>

ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಹಾದು ಹೋಗುವ ಎರಡು ರಾಷ್ಟ್ರೀಯ ಹೆದ್ದಾರಿಗಳಲ್ಲಿ ಸುಂಕ ಪಾವತಿಗೆ ಫಾಸ್ಟ್ ಟ್ಯಾಗ್ ಸೌಲಭ್ಯವನ್ನು ಪ್ರಾಯೋಗಿಕವಾಗಿ ಆರಂಭಿಸಲಾಗಿದೆ. ರಾಷ್ಟ್ರೀಯ ಹೆದ್ದಾರಿ ಮೂರು ಚೆಕ್ ಪೋಸ್ಟ್ ಗಳಾದ ಮೇಲುಕಾಮನಹಳ್ಳಿ, ಕೆಕ್ಕನಹಳ್ಳ ಹಾಗೂ ಮದ್ದೂರಿನಲ್ಲಿ ಮೂರು ಫಾಸ್ಟ್ ಟ್ಯಾಗ್ ಕೇಂದ್ರಗಳಿಗೆ ಚಾಲನೆ ನೀಡಲಾಗಿದೆ. ವನ್ಯಜೀವಿಧಾಮಕ್ಕೆ ಸಮೀಪವರ್ತಿ ರಾಜ್ಯಗಳಿಂದ ಅತಿ ಹೆಚ್ಚು ಪ್ರವಾಸಿಗರು ಈ ಹೆದ್ದಾರಿಯಾಗಿ ಸಂಚಾರ ನಡೆಸುತ್ತಿದ್ದಾರೆ, ಹೊಸ ಸೌಲಭ್ಯದ ಮೂಲಕ ಹಸಿರು ಸುಂಕ ಪಾವತಿಯೂ ಸರಳೀಕೃತಗೊಂಡು, ಹೆಚ್ಚಿನ ಅನುಕೂಲ ಕಲ್ಪಿಸಿದಂತಾಗಿದೆ ಎಂದು ಬಂಡೀಪುರ ಹುಲಿ ಸಂರಕ್ಷಿತ ಯೋಜನೆ ನಿರ್ದೇಶಕರಾದ ಪ್ರಭಾಕರನ್ ತಿಳಿಸಿದ್ದಾರೆ.

<><><>

ಹಾಸನ ಜಿಲ್ಲೆಯಲ್ಲಿ ಕಾಡಾನೆ ಸಮಸ್ಯೆ ನಿವಾರಣೆಗೆ ಪರಿಹಾರ ಮಾರ್ಗೋಪಾಯಗಳ ಬಗ್ಗೆ ಸ್ಥಳೀಯರೊಂದಿಗೆ ಚರ್ಚಿಸಿ ಸರ್ಕಾರಕ್ಕೆ ಈ ಬಗ್ಗೆ ವರದಿ ಸಲ್ಲಿಸಲಾಗುವುದು ಹಾಗೂ ಕಾಡುಪ್ರಾಣಿ ಹಾವಳಿ ಬಗೆಹರಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಸಂಸದ ಶ್ರೇಯಸ್ ಪಟೇಲ್ ಹೇಳಿದರು. ಹಾಸನ ಜಿಲ್ಲೆ, ಬೇಲೂರು ತಾಲೂಕು ಕಚೇರಿಯಲ್ಲಿ ಜರುಗಿದ ಕೇಂದ್ರ ಪುರಸ್ಕೃತ ಯೋಜನೆಗಳ ಬಗ್ಗೆ ಅಧಿಕಾರಿಗಳ ಸಭೆ ನಡೆಸಿ, ಬಳಿಕ ಸುದ್ದಿಗೋಷ್ಠಿ ಉದ್ದೇಶಿಸಿ ಅವರು ಮಾತನಾಡಿದರು.

<><><>

ಬೈಟ್: ಶ್ರೇಯಸ್ ಪಟೇಲ್

<><><>

ಚಿಂತಕ ಪ್ರೊಫೆಸರ್ ಮುಜಾಫರ್ ಅಸ್ಸಾದಿ ಹಾಗೂ ರೈತ ನಾಯಕ ಜಿ ಸಿ ಬಯ್ಯಾರೆಡ್ಡಿ ಅವರುಗಳ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಹಾಗೂ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಅಸ್ಸಾದಿ ಅವರು ತಮ್ಮ ಬರಹಗಳ ಮೂಲಕ ಹಾಗೂ ಬಯ್ಯಾರೆಡ್ಡಿ ಅವರು ಹೋರಾಟದ ಮೂಲಕ ಈ ಸಮಾಜವನ್ನು ಕಟ್ಟುತ್ತಿದ್ದರು. ಜನ ಸಮುದಾಯಗಳ ಒಳಿತಿಗಾಗಿ ಇವರಿಬ್ಬರೂ ತಮ್ಮ ಬದುಕನ್ನೇ ಸಮರ್ಪಿಸಿಕೊಂಡಿದ್ದರು. ಇವರಿಬ್ಬರ ನಿಧನದಿಂದ ನಾಡು ಬಡವಾಗಿದೆ ಎಂದು ಅವರು ತಮ್ಮ ಶೋಕಸಂದೇಶದಲ್ಲಿ ಸ್ಮರಿಸಿದ್ದಾರೆ.

<><><>

ವಯಕ್ತಿಕ ಪ್ರಗತಿ ಹಾಗೂ ಸಮಾಜದ ಒಳಿತಿಗೆ ಶಿಕ್ಷಣ ಅತೀ ಅವಶ್ಯಕವಾಗಿದೆ. ಶಿಕ್ಷಣದಿಂದಲೆ ಭವಿಷ್ಯ ಉಜ್ವಲವಾಗಲಿದೆ ಎಂದು ಕಲಬುರಗಿ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಹೇಳಿದರು. ಕಲಬುರಗಿ ನಗರದ ಎಂ.ಎಸ್.ಕೆ. ಮಿಲ್ ರಸ್ತೆಯ, ಸರ್ಕಾರಿ ಐ.ಟಿ.ಐ. ಕಾಲೇಜಿನಲ್ಲಿ ಆಯೋಜಿಸಿದ ಭಾರತದ ಮೊದಲ ಮಹಿಳಾ ಶಿಕ್ಷಕಿ ಸಾವಿತ್ರಿಬಾಯಿ ಫುಲೆ ಅವರ 194ನೇ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

<><><>

ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಆಧುನಿಕ ತಂತ್ರಜ್ಞಾನ ಬಳಸಿ ಗುಣಮಟ್ಟದ ಶಿಕ್ಷಣ ನೀಡುವುದು ವರ್ತಮಾನದ ಅಗತ್ಯವಾಗಿದೆ ಎಂದು ಪ್ರಾದೇಶಿಕ ಕ್ಷೇತ್ರ ಶಿಕ್ಷಣ ಸಮನ್ವಯಾಧಿಕಾರಿ ಕುಮಾರ ಕೆ.ಎಫ್ ಹೇಳಿದರು. ಧಾರವಾಡ ಡಯಟ್ ಕೇಂದ್ರದಲ್ಲಿ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲಾ ಶಿಕ್ಷಕರಿಗೆ ಎಐ-ಕೃತಕ ಬುದ್ಧಿಮತ್ತೆ ಆಧಾರಿತ ಶಿಕ್ಷಣ ಹಾಗೂ ಪೈಲೆಟ್ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಬೋಧನಾ ಸಂಪನ್ಮೂಲವನ್ನು ರಚಿಸಲು ಸಹಕಾರಿಯಾಗಿ ಶಿಕ್ಷಕರನ್ನು ಸಶಕ್ತಗೊಳಿಸುವ ಗುರಿಯನ್ನು ತರಬೇತಿ ಕಾರ್ಯಕ್ರಮ ಹೊಂದಿದೆ ಎಂದರು.

<><><>

ಧಾರವಾಡ ಸತ್ತೂರಿನ ರಾಷ್ಟ್ರೋತ್ಥಾನ ವಿದ್ಯಾಕೇಂದ್ರದಲ್ಲಿ ರಾಷ್ಟ್ರೋತ್ಸವ 2024–25, ಪಂಚಪರಿವರ್ತನಾ ಪಥ ಕಾರ್ಯಕ್ರಮವು ಇಂದು ಸಂಜೆ 5 ಗಂಟೆಗೆ ನಡೆಯಲಿದೆ. ಐ.ಐ.ಟಿ ನಿರ್ದೇಶಕ ಡಾಕ್ಟರ ವೆಂಕಪ್ಪಯ್ಯ ದೇಸಾಯಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..

<><><>